**ದಿನಾಂಕ 04.04.2014ರಂದು ಬೆಳಗ್ಗೆ 11.00 ಗಂಟೆಗೆ ನಿರ್ದೇಶಕರು, ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್ ಇವರ ಅಧ್ಯಕ್ಷತೆಯಲ್ಲಿ, ಗ್ರಾಮೀಣ ಪ್ರದೇಶದಲ್ಲಿ ಮಾನ್ಯುಯಲ್ ಸ್ಕ್ಯಾವೆಂಜರ್ಸ್ ಮತ್ತು ಅವರನ್ನು ಅವಲಂಬಿತ ಕುಟುಂಬಗಳ ಸಮೀಕ್ಷೆ ನಡೆಸುವ ಕುರಿತು ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ನಡೆದ ಸಭೆಯ ನಡವಳಿಗಳು:-**

**ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳು:-**

1. ನಿರ್ದೇಶಕರು, ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್, ಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಅಪರ ನಿರ್ದೇಶಕರು (ನೀರು ಮತ್ತು ನೈರ್ಮಲ್ಯ)(ಪ್ರಭಾರ), ಕ.ಗ್ರಾ.ನೀ.ಸ&ನೈ.ಸಂಸ್ಥೆ.
3. ಕಾರ್ಯನಿರ್ವಾಹಕ ಅಭಿಯಂತರರು, ಡಿ.ಎಂ.ಎ, ನಗರಾಭಿವೃದ್ಧಿ ಇಲಾಖೆ ಹಾಗೂ ನೋಡಲ್ ಅಧಿಕಾರಿಗಳು ಎಂ.ಎಸ್.ಎ
4. ಸಹಾಯಕ ಮಹಾ ಪ್ರಬಂಧಕರು, ಡಾ:ಅಂಬೇಡ್ಕರ್ ಅಭಿವೃದ್ಧಿ ನಿಗಮ, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
5. ಜಂಟಿ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
6. ಉಪ ಮಹಾಪ್ರಬಂಧಕರು, ಡಾ:ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು.
7. ರಾಜ್ಯ ಸಮಾಲೋಚಕರು, ನಿರ್ಮಲ ಭಾರತ್ ಅಭಿಯಾನ, ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್.

ಸಭೆಯ ಆರಂಭದಲ್ಲಿ ಅಪರ ನಿರ್ದೇಶಕರು, ನಿರ್ಮಲ ಭಾರತ್ ಅಭಿಯಾನ, ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್ ಇವರು ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ವಿಷಯಸೂಚಿ ಪ್ರಕಾರ ಸಭೆಯನ್ನು ಪ್ರಾರಂಭಿಸಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿಯಲ್ಲಿರುವ 5627 ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ 2011ರ ಜನಗಣತಿಯ ಪ್ರಕಾರ 3381 ಕುಟುಂಬಗಳು ಅನೈರ್ಮಲ್ಯ ಪದ್ಧತಿಯ ಶೌಚ ವ್ಯವಸ್ಥೆಯನ್ನು ಹೊಂದಿರುವುದಾಗಿ ಗುರುತಿಸಲಾಗಿದ್ದು, ಈಗಾಗಲೇ ನಮ್ಮ ಇಲಾಖೆವತಿಯಿಂದ ಎಲ್ಲಾ ಗ್ರಾಮ ಪಂಚಾಯತಿಯಲ್ಲಿ ಸಮೀಕ್ಷೆಯನ್ನು ಕೈಗೊಂಡು Insanitary Latrine ಗಳಿರುವ ಬಗ್ಗೆ ಗುರುತಿಸಿ ಅವುಗಳನ್ನು Sanitary Latrineಗಳನ್ನಾಗಿ ಪರಿವರ್ತಿಸಲಾಗಿದೆ. ಮಾನ್ಯುಯಲ್ ಸ್ಕ್ಯಾವೆಂಜರ್ ಮತ್ತು ಅವರನ್ನು ಅವಲಂಬಿತ ಕುಟುಂಬಗಳ ಸಮೀಕ್ಷೆಯನ್ನು ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಬೇಕಾಗಿದೆ. ಈ ಹಿನ್ನೆಲೆಯಲ್ಲಿ ಈಗಾಗಲೇ ಪೌರಾಡಳಿತ ಇಲಾಖೆ ನಗರ ಪ್ರದೇಶಗಳಲ್ಲಿ ಈ ಪ್ರಕ್ರಿಯೆಯನ್ನು ಪೂರ್ಣಗೊಳಿಸಿರುವುದರಿಂದ ಗ್ರಾಮೀಣ ಪ್ರದೇಶದಲ್ಲಿ ಯಾವ ರೀತಿಯಲ್ಲಿ ಸಮೀಕ್ಷೆ ಕಾರ್ಯ ಕೈಗೊಳ್ಳಬೇಕು ಎಂಬುದರ ಬಗ್ಗೆ ಸವಿವರವಾದ ಮಾಹಿತಿಯನ್ನು ನೀಡುವಂತೆ ಪೌರಾಡಳಿತ ಇಲಾಖೆಯ ಅಧಿಕಾರಿಗಳನ್ನು ಕೋರಲಾಯಿತು.

ಈಗಾಗಲೇ ನಗರ ಪ್ರದೇಶಗಳಲ್ಲಿ ಮಾನ್ಯುಯಲ್ ಸ್ಕ್ಯಾವೆಂಜರ್ ಮತ್ತು ಅವರನ್ನು ಅವಲಂಬಿತ ಕುಟುಂಬಗಳ ಸಮೀಕ್ಷೆಯನ್ನು ಯಾವ ರೀತಿ ಕೈಗೊಳ್ಳಲಾಯಿತು ಮತ್ತು ಸಮೀಕ್ಷೆ ನಡೆಸುವ ಪೂರ್ವದಲ್ಲಿ ಯಾವ ರೀತಿಯಾಗಿ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು ಎಂಬುದರ ಬಗ್ಗೆ ಕುರಿತು ಪೌರಾಡಳಿತ ಇಲಾಖೆಯ ಅಧಿಕಾರಿಗಳು ಪಿಪಿಟಿ ಮೂಲಕ ವಿವರಿಸಿದರು.

**ಸಮೀಕ್ಷೆ ನಡೆಸಲು ಕೈಗೊಳ್ಳಬೇಕಾದ ಪೂರ್ವ ಸಿದ್ಧತೆ:-**ಗ್ರಾಮೀಣ ಪ್ರದೇಶಗಳಲ್ಲಿರುವ ಮಾನ್ಯುಯಲ್ ಸ್ಕ್ಯಾವೆಂಜರ್ ಮತ್ತು ಅವರ ಅವಲಂಬಿತ ಕುಟುಂಬಗಳ ಸಮೀಕ್ಷೆ ಕೈಗೊಳ್ಳುವಾಗ ಈ ಕೆಳಕಂಡಂತೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಪೌರಾಡಳಿತ ಅಧಿಕಾರಿಗಳು ಸಲಹೆ ನೀಡಿದರು.

1. ಗ್ರಾಮೀಣ ಪ್ರದೇಶದಲ್ಲಿರುವ ಕೊಳೆಗೇರಿಗಳನ್ನು ಮೊದಲು ಗುರ್ತಿಸಬೇಕು
2. ರಾಜ್ಯ ಮಟ್ಟದಲ್ಲಿ ಸಮಿತಿಯನ್ನು ರಚಿಸುವುದು.
3. ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಬೇಕು.

4. ತಾಲ್ಲೂಕು ಹಂತದ ಸಮಿತಿ ರಚನೆ.
5. ರಾಜ್ಯ ಮಟ್ಟದಲ್ಲಿ ಇಲಾಖಾವತಿಯಿಂದ ಒಬ್ಬರು ನೋಡಲ್ ಅಧಿಕಾರಿಗಳನ್ನು ನೇಮಿಸಬೇಕು.
6. ರಾಜ್ಯದಾದ್ಯಂತ ಒಂದೇ ಮಾದರಿಯ ಮಾಹಿತಿ ಶಿಕ್ಷಣ ಮತ್ತು ಸಂವಹನ ಸಾಮಾಗ್ರಿಗಳನ್ನು ಸಿದ್ಧಪಡಿಸಿ ಪ್ರಚುರಪಡಿಸಬೇಕು.
7. ಈ ಪ್ರಕ್ರಿಯೆ ಕೈಗೊಳ್ಳುವ ಪೂರ್ವದಲ್ಲಿ TOT ನಡೆಸಬೇಕು
8. ಸಮೀಕ್ಷಾ ಪ್ರಕ್ರಿಯೆಗೆ ಸಂಬಂಧಿಸಿದಂತೆ Schedule of eventsನ್ನು ತಯಾರಿಸಿಕೊಳ್ಳುವುದು.

ಮೇಲ್ಕಂಡ ಸಮಿತಿಗಳಲ್ಲಿ ಸರ್ಕಾರೇತರ ಸಂಘ ಸಂಸ್ಥೆಗಳ ಪ್ರತಿನಿಧಿಗಳನ್ನು ಸದಸ್ಯರನ್ನಾಗಿ ನೇಮಕ ಮಾಡಿಕೊಳ್ಳಬೇಕು. ಈ ಪೈಕಿ ಒಂದು ಮಹಿಳಾ ಮುಖ್ಯಸ್ಥರಾಗಿರುವ ಸಂಸ್ಥೆಯಾಗಿರಬೇಕು.

ಸಮೀಕ್ಷೆಯನ್ನು ನಡೆಸುವ ಮುನ್ನ ಪ್ರತೀ ಗ್ರಾಮ ಪಂಚಾಯತಿಗೆ ಇಬ್ಬರಂತೆ ಗಣತಿಕಾರರನ್ನು ನೇಮಕ ಮಾಡಬೇಕು ಹಾಗೂ ಹೋಬಳಿಗೆ ಒಬ್ಬರಂತೆ ಸಮೀಕ್ಷೆಯ ಉಸ್ತುವಾರಿ ನೋಡಿಕೊಳ್ಳಲು ಮೇಲ್ವಿಚಾರಕರನ್ನು ನೇಮಕ ಮಾಡಬೇಕು. ಕಾರ್ಯಕ್ರಮ ವೇಳಾಪಟ್ಟಿಯನ್ನು ಸಿದ್ಧಪಡಿಸಿ ಅದರಂತೆ ಕಾಲಮಿತಿಯಲ್ಲಿ ಸಮೀಕ್ಷೆ ಕೈಗೊಳ್ಳಬೇಕು. ಗ್ರಾಮ ಪಂಚಾಯತಿ ಮಟ್ಟದಲ್ಲಿ ಘಟಕಗಳನ್ನು ಸ್ಥಾಪಿಸಿ ಮಾನ್ಯುಯಲ್ ಸ್ಕ್ಯಾವೆಂಜಿಂಗ್ ವೃತ್ತಿಯಲ್ಲಿ ತೊಡಗಿರುವವರು ಸ್ವಯಂ ಘೋಷಿಸಿಕೊಳ್ಳುವಂತೆ ವ್ಯಾಪಕ ಪ್ರಚಾರ ಮಾಡಬೇಕು. ಮನೆಮನೆಗೆ ಭೇಟಿ ನೀಡಿ ಸಮೀಕ್ಷೆಯನ್ನು ಕೈಗೊಳ್ಳಬೇಕು. ಇದಕ್ಕೂ ಪೂರ್ವದಲ್ಲಿ ತರಬೇತಿಯನ್ನು ಆಯೋಜಿಸಿ ಯಾವ ರೀತಿ ಮಾನ್ಯುಯಲ್ ಸ್ಕ್ಯಾವೆಂಜರ್ಸ್ ಮತ್ತು ಅವರ ಅವಲಂಬಿತ ಕುಟುಂಬಗಳ ಸಮೀಕ್ಷೆ ನಡೆಸಬೇಕು ಎಂಬ ಬಗ್ಗೆ ಸವಿವರವಾದ ಮಾಹಿತಿಯನ್ನು ನೀಡಬೇಕು.

೨೦11ರ ಜನಗಣತಿಯಲ್ಲಿ ಗುರುತಿಸಿರುವಂತೆ ಮಾನ್ಯುಯಲ್ ಸ್ಕ್ಯಾವೆಂಜರ್ ಪದ್ಧತಿಯಿರುವ ಗ್ರಾಮ ಪಂಚಾಯತಿಗಳಲ್ಲಿ ಕಟ್ಟುನಿಟ್ಟಿನ ಸಮೀಕ್ಷೆಯನ್ನು ಕೈಗೊಳ್ಳಬೇಕು. ರಾಜ್ಯದಲ್ಲಿ ಈ ಮಾನ್ಯುಯಲ್ ಸ್ಕ್ಯಾವೆಂಜರ್ ಮತ್ತು ಅವರನ್ನು ಅವಲಂಬಿತ ಕುಟುಂಬಗಳ ಸಮೀಕ್ಷೆ ನಡೆಸುವ ಕುರಿತು ಪೂರ್ವಸಿದ್ಧತೆಯನ್ನು ಮಾಡಿಕೊಂಡು ವ್ಯವಸ್ಥಿತ ರೀತಿಯಲ್ಲಿ ಈ ಕಾರ್ಯವನ್ನು ಪೂರ್ಣಗೊಳಿಸಬೇಕಾಗುತ್ತದೆ ಎಂದು ಪೌರಾಢಳತ ಇಲಾಖೆಯವರು ಮಾನ್ಯ ನಿರ್ದೇಶಕರ ಗಮನಕ್ಕೆ ತಂದರು.

ವಂದಾನರ್ಪಣೆಯೊಂದಿಗೆ ಸಭೆಯು ಮುಕಾಯ್ತುವಾಯಿತು.

ಮಿಷನ್ ನಿರ್ದೇಶಕರು
ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾಯದರ್ಶಿಗಳು
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ರವರಿಗೆ,**

1. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು.
2. ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

**ಪ್ರತಿಯನ್ನು:-**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
2. ಪ್ರಧಾನ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆರವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
3. ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
4. ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.